**All India Radio: Bangalore**
**National Bulletin In Kannada**
**15.05.2026  1.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**15.05.2026  1.10 p.m.**
**<><><><>**

ಮುಖ್ಯಾಂಶಗಳು

1. ಪಂಚರಾಷ್ಟ್ರ ಪ್ರವಾಸದ ಭಾಗವಾಗಿ ಇಂದು ಅಬುಧಾಬಿಗೆ ತಲುಪಿದ ಬೆಳೆಸಿದ ಪ್ರಧಾನಿ ನರೇಂದ್ರ ಮೋದಿ ; ಗೌರವ ವಂದನೆ ಸ್ವೀಕಾರ
2. ಜೂನ್ ೨೧ರಂದು ನೀಟ್-ಯುಜಿ ೨೦೨೬ ಮರುಪರೀಕ್ಷೆ; ಮುಂದಿನ ವರ್ಷ ಸಿಬಿಟಿ ಮಾದರಿಯಲ್ಲಿ ಪರೀಕ್ಷೆ - ಸಚಿವ ಧರ್ಮೇಂದ್ರ ಪ್ರಧಾನ್ ಘೋಷಣೆ
3. ಬ್ರಿಕ್ಸ್ ವಿದೇಶಾಂಗ ಸಚಿವರ ಸಭೆ; ಸುಧಾರಿತ ಜಾಗತಿಕ ಬಹುಪಕ್ಷೀಯ ವ್ಯವಸ್ಥೆ ನಿರ್ಮಾಣಕ್ಕೆ ಸಚಿವ ಡಾ. ಎಸ್. ಜೈಶಂಕರ್ ಕರೆ
4. ಜಾಗತಿಕ ಇಂಧನ ಬೆಲೆ ಏರಿಕೆಯ ನಡುವೆಯೂ ಭಾರತದಲ್ಲಿ ತೈಲ ಬೆಲೆಯ ಯಶಸ್ವಿ ನಿಯಂತ್ರಣ - ಸಚಿವ ಕಿರಣ್ ರಿಜಿಜು
5. ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ಲಖನೌ ಸೂಪರ್ ಜೈಂಟ್ಸ್-ಚೆನ್ನೈ ಸೂಪರ್ ಕಿಂಗ್ಸ್ ಮುಖಾಮುಖಿ

<><><>

ಪ್ರಧಾನಿ ನರೇಂದ್ರ ಮೋದಿ ಇಂದಿನಿಂದ ಯುಎಇ, ನೆದರ್‌ಲ್ಯಾಂಡ್ಸ್, ಸ್ವೀಡನ್, ನಾರ್ವೆ ಮತ್ತು ಇಟಲಿ ಸೇರಿದಂತೆ ಒಟ್ಟು ಐದು ರಾಷ್ಟ್ರಗಳ ಆರು ದಿನಗಳ ಪ್ರವಾಸ ಕೈಗೊಂಡಿದ್ದಾರೆ.  ಪಂಚ ರಾಷ್ಟ್ರ ಪ್ರವಾಸದ ಮೊದಲನೇ ಚರಣದ ಭಾಗವಾಗಿ ಯುಎಇಗೆ ಭೇಟಿ ನೀಡಲಿರುವ ಪ್ರಧಾನಿ, ಇಂದು ಅಬುಧಾಬಿಗೆ ತಲುಪಿದ್ದಾರೆ. ಈ ವೇಳೆ ಅವರಿಗೆ ಗೌರವ ವಂದನೆಯೊಂದಿಗೆ ಸ್ವಾಗತ ಕೋರಲಾಗಿದೆ. ಇಂದು ಯುನೈಟೆಡ್ ಅರಬ್ ಎಮಿರೇಟ್ಸ್ ತಲುಪಲಿರುವ ಪ್ರಧಾನಿ, ಯುಎಇ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಯೇದ್ ಅಲ್ ನಹ್ಯಾನ್ ಅವರನ್ನು ಭೇಟಿ ಮಾಡಿ, ಉನ್ನತ ಮಟ್ಟದ ಮಾತುಕತೆ ನಡೆಸಲಿದ್ದಾರೆ. ಈ ಸಂದರ್ಭದಲ್ಲಿ ಉಭಯ ನಾಯಕರು ದ್ವಿಪಕ್ಷೀಯ ವಿಷಯಗಳು ವಿಶೇಷವಾಗಿ ಇಂಧನ ಸಹಕಾರ ಪ್ರಾದೇಶಿಕ ಸ್ಥಿತಿಗತಿ ಹಾಗೂ ಪರಸ್ಪರ ಹಿತಾಸಕ್ತಿಯ ಅಂತಾರಾಷ್ಟ್ರೀಯ ವಿಚಾರಗಳ ಕುರಿತು ಚರ್ಚಿಸಿದರು. ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಮುಂದಿನ ಹಂತಕ್ಕೆ ಕೊಂಡೊಯ್ಯುವ ಬಗ್ಗೆಯೂ ಸಮಾಲೋಚನೆ ನಡೆಸಿದ್ದಾರೆ. ಪ್ರಧಾನಿ ಅವರ ಪ್ರವಾಸದ ಕುರಿತು ಸುದ್ದಿಗಾರರಿಗೆ ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ಪಶ್ಚಿಮ ವಲಯ ಹೆಚ್ಚುವರಿ ಕಾರ್ಯದರ್ಶಿ ಅಸೀಮ್ ಮಹಾಜನ್, ಭಾರತ ಮತ್ತು ಯುಎಇ ನಡುವಿನ ಸಂಬಂಧದಲ್ಲಿ ಇಂಧನ ವಲಯ ಪ್ರಮುಖ ಸ್ತಂಭವಾಗಿದೆ. ಕಳೆದ ವರ್ಷ ಭಾರತದ ಕಚ್ಚಾತೈಲ ಅಗತ್ಯತೆಯ ಶೇಕಡ ೧೧ರಷ್ಟನ್ನು ಪೂರೈಸುವ ಮೂಲಕ ಯುಎಇ ಭಾರತದ ನಾಲ್ಕನೇ ದೊಡ್ಡ ತೈಲ ಮೂಲವಾಗಿ ಹೊರಹೊಮ್ಮಿದೆ ಎಂದಿದ್ದಾರೆ.

<><><>

ವೈದ್ಯಕೀಯ ಪದವಿ ಕೋರ್ಸ್‌ಗಳಿಗೆ ಪ್ರವೇಶಕ್ಕಾಗಿ ನಡೆಸುವ ರಾಷ್ಟ್ರೀಯ ಅರ್ಹತಾ ಪ್ರವೇಶ ಪರೀಕ್ಷೆ ನೀಟ್ - ಯುಜಿ ೨೦೨೬ರ ಮರು ಪರೀಕ್ಷೆಯ ದಿನಾಂಕವನ್ನು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಪ್ರಕಟಿಸಿದ್ದು, ಜೂನ್ ೨೧ರಂದು ದೇಶಾದ್ಯಂತ ಮರು ಪರೀಕ್ಷೆ ನಡೆಸಲು ನಿರ್ಧರಿಸಲಾಗಿದೆ. ಈ ತಿಂಗಳ ೩ ರಂದು ನಡೆದಿದ್ದ ಪರೀಕ್ಷೆಯ ಪತ್ರಿಕೆ ಸೋರಿಕೆಯಾದ ಆರೋಪದ ಹಿನ್ನೆಲೆಯಲ್ಲಿ ಪರೀಕ್ಷೆಯನ್ನು ರದ್ದುಗೊಳಿಸಲಾಗಿದ್ದು, ಪ್ರಸ್ತುತ ಈ ಪ್ರಕರಣದ ತನಿಖೆಯನ್ನು ಸಿಬಿಐ ನಡೆಸುತ್ತಿದ್ದು,

ಅಭ್ಯರ್ಥಿಗಳು ಮತ್ತು ಪೋಷಕರು ಅಧಿಕೃತ ಮಾಹಿತಿಗಾಗಿ ಎನ್‌ಟಿಎಯ ಅಧಿಕೃತ ಮಾಧ್ಯಮಗಳನ್ನು ಮಾತ್ರ ಅವಲಂಬಿಸುವಂತೆ ಮನವಿ ಮಾಡಲಾಗಿದೆ. ಈ ನಡುವೆ, ನವದೆಹಲಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿರುವ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್, ವಿದ್ಯಾರ್ಥಿಗಳ ಹಿತರಕ್ಷಣೆಯೇ ಸರ್ಕಾರದ ಮೊದಲ ಆದ್ಯತೆಯಾಗಿದ್ದು, ಅವರ ಭವಿಷ್ಯದ ಬಗ್ಗೆ ಸರ್ಕಾರ ಅತ್ಯಂತ ಸಂವೇದನಾಶೀಲವಾಗಿದೆ ಎಂದಿದ್ದಾರೆ. ಜೂನ್ ೨೧ರಂದು ನಡೆಯುವ ಮರುಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಜೂನ್ ೧೪ರೊಳಗೆ ತಮ್ಮ ಪ್ರವೇಶ ಪತ್ರಗಳನ್ನು ಪಡೆಯಲಿದ್ದಾರೆ ಎಂದು ಮಾಹಿತಿ ನೀಡಿದರು. ಪರೀಕ್ಷಾ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆಯನ್ನು ಘೋಷಿಸಿದ ಸಚಿವರು, ಪ್ರಸ್ತುತ ಚಾಲ್ತಿಯಲ್ಲಿರುವ ಓಎಂಆರ್ ಆಧಾರಿತ ಪರೀಕ್ಷಾ ಪದ್ಧತಿಯ ಬದಲಾಗಿ, ಮುಂದಿನ ವರ್ಷದಿಂದ ನೀಟ್ ಪರೀಕ್ಷೆಯನ್ನು 'ಕಂಪ್ಯೂಟರ್ ಆಧಾರಿತ ಪರೀಕ್ಷೆ' ಮಾದರಿಯಲ್ಲಿ ನಡೆಸಲಾಗುವುದು ಎಂದು ತಿಳಿಸಿದರು. ಭವಿಷ್ಯದಲ್ಲಿ ಅಕ್ರಮಗಳು ಮರುಕಳಿಸದಂತೆ ಪರೀಕ್ಷಾ ವ್ಯವಸ್ಥೆಯನ್ನು ಬಲಪಡಿಸಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ ಸಚಿವರು, ಅಕ್ರಮ ಎಸಗುವ ಅಭ್ಯರ್ಥಿಗಳ ಸಂಚಿನಿಂದಾಗಿ ಯಾವುದೇ ಅರ್ಹ ವಿದ್ಯಾರ್ಥಿಯು ತನ್ನ ಹಕ್ಕುಗಳಿಂದ ವಂಚಿತನಾಗಬಾರದು ಎಂಬುದು ಸರ್ಕಾರದ ಆಶಯವಾಗಿದೆ. ಪರೀಕ್ಷಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ನಂಬಿಕೆಯನ್ನು ಮರುಸ್ಥಾಪಿಸಲು ಸರ್ಕಾರ ಬದ್ಧವಾಗಿದೆ ಎಂದು ಪುನರುಚ್ಚರಿಸಿದರು.

<><><><>

ಬದಲಾಗುತ್ತಿರುವ ಜಾಗತಿಕ ಪರಿಸ್ಥಿತಿಗೆ ಅನುಗುಣವಾಗಿ ಸುಧಾರಿತ ಮತ್ತು ಪರಿಣಾಮಕಾರಿ ಬಹು ಪಕ್ಷೀಯ ವ್ಯವಸ್ಥೆಯನ್ನು ಮುನ್ನಡೆಸಲು ಭಾರತ ತನ್ನ ಎಲ್ಲಾ ಪಾಲುದಾರ ರಾಷ್ಟ್ರಗಳೊಂದಿಗೆ ಒಟ್ಟಾಗಿ ಕೆಲಸ ಮಾಡಲು ಬದ್ಧವಾಗಿದೆ ಎಂದು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ನಡೆಯುತ್ತಿರುವ ಬ್ರಿಕ್ಸ್ ವಿದೇಶಾಂಗ ಸಚಿವರ ಸಭೆ-೨೦೨೬ರ ಎರಡನೇ ದಿನದ ಮುಕ್ತ ಅಧಿವೇಶನವನ್ನುದ್ದೇಶಿಸಿ ಮಾತನಾಡಿದ ಅವರು, ಪ್ರಸ್ತುತ ಅಂತಾರಾಷ್ಟ್ರೀಯ ಹಣಕಾಸು ವ್ಯವಸ್ಥೆಯಲ್ಲಿ ತುರ್ತು ಸುಧಾರಣೆಗಳ ಅಗತ್ಯವಿದೆ. ಇಂದಿನ ನೈಜಸ್ಥಿತಿಯನ್ನು ಬಿಂಬಿಸುವ ಹಾಗೂ ಉದಯೋನ್ಮುಖ ಮಾರುಕಟ್ಟೆಗಳು ಮತ್ತು ಅಭಿವೃದ್ಧಿಶೀಲ ರಾಷ್ಟ್ರಗಳ ಆಕಾಂಕ್ಷೆಗಳಿಗೆ ಸ್ಪಂದಿಸುವ ಜಾಗತಿಕ ವ್ಯವಸ್ಥೆಯ ಪರವಾಗಿ ಭಾರತ ನಿರಂತರವಾಗಿ ಧ್ವನಿ ಎತ್ತುತ್ತಾ ಬಂದಿದೆ ಎಂದು ಹೇಳಿದರು.

<><><><>

ಪಶ್ಚಿಮ ಏಷ್ಯಾ ಸಂಘರ್ಷದಿಂದಾಗಿ ಜಾಗತಿಕವಾಗಿ ಇಂಧನ ಬೆಲೆಗಳು ತೀವ್ರ ಏರಿಕೆ ಕಂಡಿದ್ದರೂ, ಭಾರತವು ದೇಶೀಯ ಮಾರುಕಟ್ಟೆಯಲ್ಲಿ ತೈಲ ಬೆಲೆಗಳನ್ನು ಯಶಸ್ವಿಯಾಗಿ ನಿಯಂತ್ರಿಸಿದೆ ಎಂದು ಕೇಂದ್ರ ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ. ಬೆಲೆ ಏರಿಕೆಯ ಆಘಾತದಿಂದ ನಾಗರಿಕರನ್ನು ರಕ್ಷಿಸುವಲ್ಲಿ ಇದು ಪ್ರಧಾನಿ ನರೇಂದ್ರ ಮೋದಿ ಸರ್ಕಾರದ ಜನಪರ ಆಡಳಿತಕ್ಕೆ ಸಾಕ್ಷಿಯಾಗಿದೆ ಎಂದು ಅವರು ಶ್ಲಾಘಿಸಿದ್ದಾರೆ. ಜಾಗತಿಕವಾಗಿ ಕಚ್ಚಾ ತೈಲದ ಬೆಲೆ ಪ್ರತಿ ಬ್ಯಾರೆಲ್‌ಗೆ ೧೦೦ ಡಾಲರ್ ದಾಟಿದಾಗ ವಿಶ್ವದ ವಿವಿಧ ದೇಶಗಳಲ್ಲಿ ಇಂಧನ ದರ ಶೇಕಡ ೨೦ ರಿಂದ ೧೦೦ ರಷ್ಟು ಹೆಚ್ಚಳವಾಗಿತ್ತು. ಆದರೆ ಭಾರತವು ಈ ಏರಿಕೆಯನ್ನು ಪೆಟ್ರೋಲ್ ಮೇಲೆ ಕೇವಲ ಶೇಕಡ ೩.೨ ಮತ್ತು ಡೀಸೆಲ್ ಮೇಲೆ ಶೇಕಡ ೩.೪ಕ್ಕೆ ಸೀಮಿತಗೊಳಿಸಿದೆ. ಮಾರುಕಟ್ಟೆಯ ಏರಿಳಿತದ ನಡುವೆಯೂ ನಾಗರಿಕರ ಮೇಲಿನ ಆರ್ಥಿಕ ಹೊರೆಯನ್ನು ತಪ್ಪಿಸಲು ಭಾರತದ ಸಾರ್ವಜನಿಕ ವಲಯದ ತೈಲ ಕಂಪನಿಗಳು ಸುಮಾರು ೭೬ ದಿನಗಳ ಕಾಲ ಭಾರಿ ನಷ್ಟವನ್ನು ತಾವೇ ಭರಿಸಿವೆ. ಇತ್ತೀಚೆಗೆ ಮಾಡಲಾದ ಪ್ರತಿ ಲೀಟರ್‌ಗೆ ೩ ರೂಪಾಯಿಗಳ ಬೆಲೆ ಪರಿಷ್ಕರಣೆಯು ಸುದೀರ್ಘ ಸ್ಥಿರತೆಯ ನಂತರದ ಮೊದಲ ಬದಲಾವಣೆಯಾಗಿದ್ದು, ಜಾಗತಿಕ ಏರಿಕೆಗೆ ಹೋಲಿಸಿದರೆ ಇದು ಅತ್ಯಂತ ಕಡಿಮೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಸಾರ್ವಜನಿಕ ವಲಯದ ತೈಲ ಕಂಪನಿಗಳು ದೇಶೀಯ ಮಾರುಕಟ್ಟೆಯಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ದರವನ್ನು ಪ್ರತಿ ಲೀಟರ್‌ಗೆ ತಲಾ ೩ ರೂಪಾಯಿ ಹೆಚ್ಚಿಸಿವೆ.

<><><><>

ಆಂಧ್ರಪ್ರದೇಶದ ಶ್ರೀ ಸತ್ಯಸಾಯಿ ಜಿಲ್ಲೆಯ ಪುಟ್ಟಪರ್ತಿಯಲ್ಲಿ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಇಂದು ಹಲವು ಪ್ರಮುಖ ಏರೋಸ್ಪೇಸ್ ಮತ್ತು ರಕ್ಷಣಾ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು. ಈ ವೇಳೆ, ವೈಮಾನಿಕ ಅಭಿವೃದ್ಧಿ ಸಂಸ್ಥೆ - ಎಡಿಎಯ ವಿಮಾನ ಜೋಡಣೆ ಮತ್ತು ಹಾರಾಟ ಪರೀಕ್ಷಾ ಕೇಂದ್ರಕ್ಕೆ ಶಂಕುಸ್ಥಾಪನೆ ನೆರವೇರಿಸಲಾಗಿದೆ. ಈ ನೂತನ ಕೇಂದ್ರ, ವಿಮಾನಗಳ ಜೋಡಣೆ, ಪರೀಕ್ಷೆ, ಮೌಲ್ಯೀಕರಣ ಮತ್ತು ಪ್ರಮಾಣೀಕರಣ ಪ್ರಕ್ರಿಯೆಗಳನ್ನು ಚುರುಕುಗೊಳಿಸಲಿದ್ದು, ವಿಶೇಷವಾಗಿ ದೇಶದ ಸುಧಾರಿತ ಮಧ್ಯಮ ಯುದ್ಧ ವಿಮಾನ ಕಾರ್ಯಕ್ರಮದ ಅಭಿವೃದ್ಧಿಗೆ ಹೆಚ್ಚಿನ ವೇಗ ನೀಡಲಿದೆ. ಸಚಿವ ರಾಜನಾಥ್ ಸಿಂಗ್, ಅನಕಾಪಲ್ಲಿಯಲ್ಲಿ ಸ್ಥಾಪನೆಯಾಗಲಿರುವ ಭಾರತ್ ಡೈನಾಮಿಕ್ಸ್ ಲಿಮಿಟೆಡ್‌ನ ಅತ್ಯಾಧುನಿಕ ನೌಕಾ ವ್ಯವಸ್ಥೆಗಳ ಉತ್ಪಾದನಾ ಘಟಕಕ್ಕು ಶಂಕುಸ್ಥಾಪನೆ ನೆರವೇರಿಸಿದರು. ಈ ಘಟಕ ನೌಕಾಪಡೆಗೆ ಅಗತ್ಯವಿರುವ ಅತ್ಯಾಧುನಿಕ ಶಸ್ತ್ರಾಸ್ತ್ರ ವ್ಯವಸ್ಥೆಗಳನ್ನು ತಯಾರಿಸುವಲ್ಲಿ ಪ್ರಮುಖಪಾತ್ರ ವಹಿಸಲಿದೆ.

<><><>

ಭಾರತೀಯ ಸೇನೆಯ ಮೊದಲ ದಂಡನಾಯಕ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಅವರ ಪುಣ್ಯಸ್ಮರಣೆಯ ದಿನವಾದ ಇಂದು ಅವರಿಗೆ ಭಾರತೀಯ ಸಶಸ್ತ್ರ ಪಡೆಗಳು ಗೌರವ ನಮನ ಸಲ್ಲಿಸಿವೆ. ಕೇಂದ್ರ ಸಚಿವ ನಿತಿನ್ ಗಡ್ಕರಿ, ಉತ್ತರ ಪ್ರದೇಶ ಉಪಮುಖ್ಯಮಂತ್ರಿ ಕೇಶವ್ ಪ್ರಸಾದ್ ಮೌರ್ಯ ಸೇರಿದಂತೆ ಅನೇಕ ಗಣ್ಯರು ಸಾಮಾಜಿಕ ಮಾಧ್ಯಮದ ಮೂಲಕ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಅವರನ್ನು ಸ್ಮರಿಸಿ, ಗೌರವ ನಮನ ಸಲ್ಲಿಸಿದ್ದಾರೆ. ೧೮೯೯ರ ಜನವರಿ ೨೮ರಂದು ಕರ್ನಾಟಕದ ಕೊಡಗು ಜಿಲ್ಲೆಯಲ್ಲಿ ಜನಿಸಿದ ಕೆ.ಎಂ. ಕಾರ್ಯಪ್ಪ ಅವರು, ಭಾರತೀಯ ಸೇನಾ ಇತಿಹಾಸದ ಅತ್ಯಂತ ಗೌರವಾನ್ವಿತ ವ್ಯಕ್ತಿಗಳಲ್ಲಿ ಒಬ್ಬರು. ಸ್ವಾತಂತ್ರ್ಯಾ ನಂತರ ೧೯೪೯ರಲ್ಲಿ ಬ್ರಿಟೀಷ್ ಜನರಲ್ ಸರ್ ರಾಯ್ ಬುಚರ್ ಅವರಿಂದ ಅಧಿಕಾರ ಸ್ವೀಕರಿಸುವ ಮೂಲಕ ಭಾರತೀಯ ಸೇನೆಯ ಮೊದಲ ಭಾರತೀಯ ಕಮಾಂಡರ್ ಇನ್ ಚೀಫ್ ಆಗಿ ಜವಾಬ್ದಾರಿ ವಹಿಸಿಕೊಂಡರು.

<><><>

ಲಕ್ನೋದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ತಂಡವು ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>